ಬುಧವಾರ 27.08.2025 ಬೆಂಗಳೂರು ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 34

Digital Varthe Kannada Daily Volume 01 - Issue 34 Wednesday 27.08.2025 Price: 5/- Rs 2 Pages Bangalore

# ಡಿಜಿಟಲ್ ವಾರ್ತೆ

DIGITAL VARTHE

www.digitalvarthe.com

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

# RSS ಗೀತೆ ಹಾಡಿದ್ದಕ್ಕೆ ನೋವಾಗಿದ್ದರೆ ಕ್ಷಮೆ ಕೇಳುತ್ತೇನೆ: ಡಿ.ಕೆ ಶಿವಕುಮಾರ್

## ನನ್ನ ಧರ್ಮ ನಾನು ಬಿಡಲ್ಲ, ಹೈಕಮಾಂಡ್ ಕ್ಷಮೆ ಕೇಳಲು ಹೇಳಿಲ್ಲ

ಬೆಂಗಳೂರು: ರಾಷ್ಟ್ರೀಯ ಸ್ವಯಂ ಸೇವಕ(RSS) ಸಂಘದ ಗೀತೆ ನಮಸ್ತೇ ಸದಾ ವತ್ಸಲೇ ಸಾಲುಗಳನ್ನು ವಿಧಾನಸಭೆ ಕಲಾಪದ ವೇಳೆ ಉಪ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಅಧ್ಯಕ್ಷ ಡಿ ಕೆ ಶಿವಕುಮಾರ್ ಪ್ರಸ್ತಾಪಿಸಿದ್ದರು. ಅದು ಸಾಕಷ್ಟು ಸದ್ದು ಮಾಡಿ ಡಿ ಕೆ ಶಿವಕುಮಾರ್ ಅವರ ಮಾತುಗಳಿಗೆ ಸ್ವತಃ ಕಾಂಗ್ರೆಸ್ ನಾಯಕರೇ ಆಕ್ಷೇಪ ವ್ಯಕ್ತಪಡಿಸಿದ್ದರು. ಬಿಕೆ ಹರಿಪ್ರಸಾದ್ ಅವರು, ಕೆಪಿಸಿಸಿ ಅಧ್ಯಕ್ಷರಾಗಿ ಡಿಕೆ ಶಿವಕುಮಾರ್ ಆರ್‌ಎಸ್‌ಎಸ್ ಗೀತೆ ಹಾಡಿದ್ದರೆ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದ್ದರು. ಅದಕ್ಕೆ ಇಂದು ಸುದ್ದಿಗೋಷ್ಠಿ ನಡೆಸಿದ ಡಿ ಕೆ ಶಿವಕುಮಾರ್ ಸ್ಪಷ್ಟನೆ ನೀಡಿ ಕ್ಷಮೆ ಕೇಳಿದ್ದಾರೆ.

ನಾನು ಹುಟ್ಟಿದ್ದೇ ಕಾಂಗ್ರೆಸ್ಸಿಗನಾಗಿ. ನಾನು ಸಾಯುವುದೂ ಕಾಂಗ್ರೆಸ್ಸಿಗನಾಗಿಯೇ. ನನ್ನ ಪಕ್ಷ ನಿಷ್ಠೆಯನ್ನು ಪ್ರಶ್ನಿಸುವವರು ಮೂರ್ಖರು' ಎಂದು ಖಡಕ್ ತಿರುಗೇಟು ನೀಡಿದರು. ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಅವರಿಗೆ ಉತ್ತರ ನೀಡುವಾಗ, ಆರ್ ಎಸ್ ಎಸ್ ಸಿದ್ಧಾಂತದ ಅರಿವಿದೆ ಎಂದು ಕಾಲೆಳೆದೆ ಅಷ್ಟೆ. ಅದು ಬಿಟ್ಟರೆ ಇನ್ನೇನಿಲ್ಲ ಎಂದರು.

ವಿಧಾನಸಭೆಯಲ್ಲಿ ಆಚಾರ ವಿಚಾರಗಳನ್ನು ಪಾಲನೆ ಮಾಡಿಕೊಂಡು ಬಂದಿದ್ದೇನೆ. ವಿದ್ಯಾರ್ಥಿ ಸಂಘಟನೆಯಲ್ಲಿಂದಲೇ ಗುರುತಿಸಿಕೊಂಡು ಬಂದಿದ್ದೇನೆ. ಹೊಸದಾಗಿ ಕಾಂಗ್ರೆಸ್ ಸೇರಿಲ್ಲ, ಯಾರ ಪಾಠವೂ ಅಗತ್ಯವಿಲ್ಲ. ನನಗೂ ಗಾಂಧಿ ಕುಟುಂಬಕ್ಕೂ ಭಕ್ತ ಭಗವಂತನ ನಡುವಿರುವ ಸಂಬಂಧ. ನಾನು ಎಂಎ ಪೊಲಿಟಿಕಲ್ ವಿದ್ಯಾರ್ಥಿ.

ರಾಜಕಾರಣಕ್ಕೆ ಬರೋದಕ್ಕಿಂತಲೂ ಮುನ್ನ ಎಲ್ಲಾ ಪಕ್ಷಗಳ ಅಧ್ಯಯನ ಮಾಡಿದ್ದೇನೆ. ಕಮ್ಯೂನಿಸಂ, ಬಿಜೆಪಿ, ಆರ್‌ಎಸ್‌ಎಸ್, ದಳ ಎಲ್ಲ ಪಕ್ಷಗಳ ಬಗ್ಗೆ ತಿಳಿದಿದ್ದೇನೆ. ಮುಸ್ಲಿಂ ಲೀಗ್ ಸಮಾವೇಶದಲ್ಲೂ



ಭಾಗಿಯಾಗಿದ್ದೆ. ಅವರ ಶಿಸ್ತಿಗೆ ಬೆರಗಾಗಿದ್ದೆ. ನನ್ನ ಮಾತು ಯಾರಿಗಾದರೂ ನೋವಾಗಿದ್ದರೆ ಬೇಕಾದರೆ ಕ್ಷಮೆ ಕೇಳೋಣ. ಬಿಕೆ ಹರಿಪ್ರಸಾದ್‌ಗೂ ಕ್ಷಮೆ ಕೇಳೋಣ ಎಂದರು.

ನಾನು ಕಾಂಗ್ರೆಸ್ ಪಕ್ಷದಲ್ಲಿದ್ದೇನೆ ನಿಜ. ಹಾಗೆಂದು ನನ್ನ ಧರ್ಮ ನಾನು ಬಿಡಲ್ಲ. ನನ್ನ ಧರ್ಮದ ಜತೆಗೆ ಇತರ ಧರ್ಮಗಳ ಬಗ್ಗೆಯೂ ನನಗೆ ನಂಬಿಕೆ ಇದೆ. ಮುಸ್ಲಿಂ, ಕ್ರಿಶ್ಚಿಯನ್ ಇತರ ಧರ್ಮಗಳ ಬಗ್ಗೆಯೂ ಗೌರವ ಇದೆ. ಆದರೆ, ಇವೆಲ್ಲದಕ್ಕಿಂತಲೂ ಮಾನವ ಧರ್ಮದ ಮೇಲೆ ನಾನು ಹೆಚ್ಚು ನಂಬಿಕೆ ಇಟ್ಟಿದ್ದೇನೆ ಎಂದು ಹೇಳಿದರು.

ಯಾರಿಗೇ ಆಗಲಿ ನನ್ನಿಂದ ನೋವಾಗಿದ್ದರೆ ಕ್ಷಮೆ ಕೇಳಲು ಸಿದ್ಧ. ಎಲ್ಲರ ಬಳಿಯೂ ಕ್ಷಮೆ ಕೇಳುತ್ತೇನೆ. ಆದರೆ, ಒಂದು ವಿಚಾರ ಸ್ಪಷ್ಟ ಇರಲಿ. ಯಾರೂ ನನ್ನನ್ನು ಪ್ರಶ್ನೆ ಮಾಡಿಲ್ಲ. ಹೈಕಮಾಂಡ್ ಕೂಡ ಕೇಳಿಲ್ಲ. ಈ ವಿಚಾರ ಇಲ್ಲಿಗೆ ಮುಗಿಸೋಣ. ನನ್ನ ಮತ್ತು ಕಾಂಗ್ರೆಸ್ ಸಂಬಂಧ ಭಕ್ತ ಮತ್ತು ಭಗವಂತನ ಸಂಬಂಧದಂತೆ ಎಂದು ಡಿಕೆ ಶಿವಕುಮಾರ್ ಸ್ಪಷ್ಟಪಡಿಸಿದರು.

## ನಾನು ಪ್ರತಿಕ್ರಿಯಿಸುವುದಿಲ್ಲ; ಜಿ ಪರಮೇಶ್ವರ

ಬೆಂಗಳೂರು: ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಇತ್ತೀಚೆಗೆ ವಿಧಾನಸಭೆಯೊಳಗೆ ರಾಷ್ಟ್ರೀಯ ಸ್ವಯಂಸೇವಕ ಸಂಘದ (RSS) ಗೀತೆಯನ್ನು ಪಠಿಸಿದ್ದ ವಿಚಾರಕ್ಕೆ ಪ್ರತಿಕ್ರಿಯಿಸಲು ಗೃಹ ಸಚಿವ ಜಿ ಪರಮೇಶ್ವರ ಮಂಗಳವಾರ ನಿರಾಕರಿಸಿದರು.

ಕಾಂಗ್ರೆಸ್ ಹೈಕಮಾಂಡ್ ಇದ್ದು, ನಾಯಕರು ಏನು ಮಾಡುತ್ತಿದ್ದಾರೆಂದು ಅವರಿಗೆ ತಿಳಿದಿದೆ. ಶಿವಕುಮಾರ್ ಮಾಡಿದ್ದು ತಪ್ಪು ಎಂದು ಹೈಕಮಾಂಡ್ ಭಾವಿಸಿದರೆ, ಅವರು ಅವರಿಂದ ಉತ್ತರವನ್ನು ಪಡೆಯುತ್ತಾರೆ ಎಂದು ಪರಮೇಶ್ವರ ಹೇಳಿದರು.

'ನಾನು ಅದರ ಬಗ್ಗೆ ಪ್ರತಿಕ್ರಿಯಿಸಲು ಬಯಸುವುದಿಲ್ಲ. ನಮಗೆ ಹೈಕಮಾಂಡ್ ಇದೆ. ಅವರು ಯಾವಾಗಲೂ ಪಕ್ಷದ ನಾಯಕರು ಏನು ಮಾಡುತ್ತಿದ್ದಾರೆ, ಯಾವ ಹೇಳಿಕೆಗಳನ್ನು ನೀಡುತ್ತಿದ್ದಾರೆ ಅಥವಾ ವಿಷಯಗಳ ಬಗ್ಗೆ ಯಾವ ನಿಲುವು ತೆಗೆದುಕೊಳ್ಳುತ್ತಿದ್ದಾರೆ ಎಂಬುದನ್ನು ಗಮನಿಸುತ್ತಿರುತ್ತಾರೆ. ಅದನ್ನು ಹೈಕಮಾಂಡ್ ನೋಡಬೇಕು. ಇದು ತಪ್ಪು ಎಂದು ಅವರು ಭಾವಿಸಿದರೆ, ಅವರು ಶಿವಕುಮಾರ್ ಅವರಿಂದ ಉತ್ತರವನ್ನು ಕೇಳುತ್ತಾರೆ. ಇದು ಕೇವಲ ಉಲ್ಲೇಖ ಎಂದು ಅವರು ಭಾವಿಸಿದರೆ ಮತ್ತು ಅದು ಬೇರೆ ಸಂದರ್ಭದಲ್ಲಿದ್ದರೆ, ಅವರು ಈ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ' ಎಂದು ಪರಮೇಶ್ವರ ಸುದ್ದಿಗಾರರಿಗೆ ತಿಳಿಸಿದರು.

# ಮತ್ತೆ ಬೈಕ್ ಟ್ಯಾಕ್ಸಿ ಸೇವೆ ಸ್ಥಗಿತ, ಪ್ರಯಾಣಿಕರಿಗೆ ಸಂಕಷ್ಟ

## ಅಗ್ರಿಗೇಟರ್‌ಗಳಿಗೆ ಅನುಮತಿ ನೀಡುವ ಯಾವುದೇ ಆದೇಶವನ್ನು ಹೊರಡಿಸಿಲ್ಲ

ಬೆಂಗಳೂರು: ಎರಡು ತಿಂಗಳ ನಿಷೇಧದ ನಂತರ ಸ್ವಲ್ಪ ಸಮಯದವರೆಗೆ ಕಾರ್ಯಾಚರಣೆಯನ್ನು ಪುನರಾರಂಭಿಸಿದ್ದ ಬೈಕ್ ಟ್ಯಾಕ್ಸಿ ಸೇವೆಗಳನ್ನು ಕರ್ನಾಟಕದಲ್ಲಿ ಮತ್ತೆ ಸ್ಥಗಿತಗೊಳಿಸಲಾಗಿದೆ. ಓಲಾ ಮತ್ತು ಉಬರ್‌ನಂತಹ ವೇದಿಕೆಗಳಲ್ಲಿ ಬೈಕ್ ಟ್ಯಾಕ್ಸಿ ಸೇವೆಗಳನ್ನು ಒದಗಿಸಲಾಗುತ್ತಿತ್ತು.

ಆಗಸ್ಟ್ 22 ರಂದು ಕರ್ನಾಟಕ ಹೈಕೋರ್ಟ್ ರಾಜ್ಯದಲ್ಲಿ ಬೈಕ್ ಟ್ಯಾಕ್ಸಿಗಳನ್ನು ನಿರ್ವಹಿಸಲು ಅಗ್ರಿಗೇಟರ್‌ಗಳಿಗೆ ಅನುಮತಿ ನೀಡುವ ಯಾವುದೇ ಆದೇಶವನ್ನು ಹೊರಡಿಸಿಲ್ಲ ಎಂದು ಸ್ಪಷ್ಟಪಡಿಸಿದ ನಂತರ ಈ ಕ್ರಮ ಕೈಗೊಳ್ಳಲಾಗಿದೆ.

ಈ ಕ್ರಮ ಇದೀಗ ಬೆಂಗಳೂರಿನಲ್ಲಿ ಸಾವಿರಾರು ಪ್ರಯಾಣಿಕರನ್ನು ಗೊಂದಲಕ್ಕೀಡು ಮಾಡಿದೆ. ಬೈಕ್ ಟ್ಯಾಕ್ಸಿಗಳು ಒಂದು ಪ್ರಮುಖ, ಕಡಿಮೆ-ವೆಚ್ಚದ ಸಾರಿಗೆ ವಿಧಾನವಾಗಿದ್ದು, ನಗರದ ಸಂಚಾರ ದಟ್ಟಣೆ ಕಡಿಮೆ ಮಾಡಲು ಸಹಾಯ ಮಾಡುತ್ತವೆ. ಇದೀಗ ಆ ಸೇವೆಗಳನ್ನು ಸ್ಥಗಿತಗೊಳಿಸಿರುವುದರಿಂದ ಪ್ರಯಾಣದ ಸವಾಲುಗಳನ್ನು ಇನ್ನಷ್ಟು ಹದಗೆಡಿಸುತ್ತದೆ. ಪ್ರಯಾಣ ವೆಚ್ಚವನ್ನು ಹೆಚ್ಚಿಸುತ್ತದೆ ಮತ್ತು ವಿಶೇಷವಾಗಿ ವಿದ್ಯಾರ್ಥಿಗಳು, ಕಚೇರಿಗೆ ಹೋಗುವವರು ಮತ್ತು ದಿನಗೂಲಿ ಕಾರ್ಮಿಕರ ಮೇಲೆ ಪರಿಣಾಮ ಬೀರುತ್ತದೆ ಎಂದು ನಿರೀಕ್ಷಿಸಲಾಗಿದೆ. ಈ ಅನಿಶ್ಚಿತತೆಯ ವಿರುದ್ಧ ಸಾಮಾಜಿಕ ಮಾಧ್ಯಮ ಬಳಕೆದಾರರು ಕಿಡಿಕಾರಿದ್ದಾರೆ.




ಅಮಿತ್ ಎಂಬ ಪ್ರಯಾಣಿಕ, 'ಮಾನ್ಯ ಮುಖ್ಯಮಂತ್ರಿಗಳೇ ಮತ್ತು ಉಪಮುಖ್ಯಮಂತ್ರಿಗಳೇ, ಬೈಕ್ ಟ್ಯಾಕ್ಸಿಗಳ ಮೇಲೆ ಮತ್ತೆ ಈ ನಿಷೇಧ ಏಕೆ? ಜನರು ಈಗಾಗಲೇ ಕೆಟ್ಟ ರಸ್ತೆಗಳು ಮತ್ತು ಸಂಚಾರದಿಂದ ಬಳಲುತ್ತಿದ್ದಾರೆ. ನಮಗೆ ಸಹಾಯ ಮಾಡುವ ಯಾವುದನ್ನಾದರೂ ಏಕೆ ನಿಲ್ಲಿಸಬೇಕು? ಸರಿಯಾದ ಕಾರಣವಿದ್ದರೆ, ಅದನ್ನು ವಿವರಿಸಿ' ಎಂದು ಬರೆದಿದ್ದಾರೆ.

'ಟ್ರಾಫಿಕ್ ಸಮಸ್ಯೆಗೆ ಮತ್ತು ಆಟೋ ಚಾಲಕರಿಂದಾಗುವ ಕಿರುಕುಳವನ್ನು ಕೊನೆಗೊಳಿಸಲು ಬೈಕ್ ಟ್ಯಾಕ್ಸಿ ಒಂದು ಪರಿಹಾರವಲ್ಲವೇ? ಸುಪ್ರೀಂ ಕೋರ್ಟ್ ಕೂಡ ಬೈಕ್ ಟ್ಯಾಕ್ಸಿಗಳು ಕಾನೂನುಬದ್ಧವಾಗಿವೆ ಎಂದು ಹೇಳಿದೆ' ಎಂದು ಮತ್ತೊಬ್ಬ ಬಳಕೆದಾರರು ಕಾಮೆಂಟ್ ಮಾಡಿದ್ದಾರೆ.

ಕಾನೂನು ಅಸ್ಪಷ್ಟತೆಗಳು ಮತ್ತು ಜಾರಿ ಕ್ರಮಗಳ ನಡುವೆ ಬೈಕ್ ಟ್ಯಾಕ್ಸಿ ಸೇವೆಗಳು ಪದೇ ಪದೇ ಸ್ಥಗಿತಗೊಳ್ಳುವುದರಿಂದ ಪ್ರಯಾಣಿಕರು ಈಗ ಸರ್ಕಾರವನ್ನು ಸಂಪೂರ್ಣ ನಿಷೇಧವನ್ನು ತೆಗೆದುಹಾಕಲು ಮತ್ತು ಬೈಕ್ ಟ್ಯಾಕ್ಸಿಗಳನ್ನು ನಿಯಂತ್ರಿಸಬೇಕೆಂದು ಒತ್ತಾಯಿಸುತ್ತಿದ್ದಾರೆ.

ಶುಕ್ರವಾರ, ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿಎಂ ಜೋಶಿ ಅವರನ್ನೊಳಗೊಂಡ ವಿಭಾಗೀಯ ಪೀಠವು, ಅಡ್ವೊಕೇಟ್ ಜನರಲ್ ಶಶಿ ಕಿರಣ್ ಶೆಟ್ಟಿ ಅವರಿಗೆ ಮೌಖಿಕವಾಗಿ ಸ್ಪಷ್ಟಪಡಿಸಿತು. ಆಗಸ್ಟ್ 20 ರಂದು ಹೊರಡಿಸಲಾದ ತನ್ನ ಹಿಂದಿನ ಆದೇಶವು ವೈಯಕ್ತಿಕ ಸವಾರರನ್ನು ದಂಡ ಅಥವಾ ಕಿರುಕುಳದಿಂದ ರಕ್ಷಿಸುವ ಉದ್ದೇಶವನ್ನು ಹೊಂದಿತ್ತು. ಬೈಕ್ ಟ್ಯಾಕ್ಸಿ ಸೇವೆಗಳನ್ನು ಈ ಹಿಂದೆ ನಿರ್ಬಂಧಿಸಿದ್ದರೆ ಅಥವಾ ನಿಷೇಧಿಸಲ್ಪಟ್ಟಿದ್ದರೆ ತಮ್ಮ ಸೇವೆಗಳನ್ನು ಪುನರಾರಂಭಿಸಲು ಯಾವುದೇ ಅನುಮತಿ ನೀಡಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಓಲಾ, ಉಬರ್ ಮತ್ತು ರ್‍ಯಾಪಿಡೋದಂತಹ ಕಂಪನಿಗಳು ತಮ್ಮ ಅಪ್ಲಿಕೇಶನ್‌ಗಳಲ್ಲಿ ಬೈಕ್ ಟ್ಯಾಕ್ಸಿ ಸೇವೆಗಳನ್ನು ಒದಗಿಸಲು ಯಾವುದೇ ಅನುಮತಿ ನೀಡದಿದ್ದರೂ ಪುನರಾರಂಭಿಸಿವೆ ಎಂದು ಎಜಿ ನ್ಯಾಯಾಲಯಕ್ಕೆ ತಿಳಿಸಿದ್ದರು. ಇದರ ನಂತರ, ವೇದಿಕೆಗಳು ಸೋಮವಾರ ಸೇವೆಯನ್ನು ಹಿಂತೆಗೆದುಕೊಂಡವು, ಇದರಿಂದಾಗಿ ಅನೇಕ ಪ್ರಯಾಣಿಕರು ತೊಂದರೆಗೆ ಸಿಲುಕಿಕೊಂಡರು.

ಇತ್ತೀಚಿನ ನಿರ್ಬಂಧಗಳಿಂದಾಗಿ ಆದಾಯ ಕಳೆದುಕೊಂಡ ತನ್ನ ಸವಾರರಿಗೆ ಸಹಾಯ ಮಾಡಲು ರ್‍ಯಾಪಿಡೋ ಲಾಭರಹಿತ ಪ್ರಯತ್ನವಾಗಿ ಬೈಕ್ ಡೈರೆಕ್ಟ್ ಅನ್ನು ಪ್ರಾರಂಭಿಸಿದೆ. ಹೈಕೋರ್ಟ್ ಈ ವ್ಯಕ್ತಿಗಳಿಗೆ ಸ್ವತಂತ್ರವಾಗಿ ಕೆಲಸ ಮಾಡಲು ಅವಕಾಶ ನೀಡಿದ್ದರೂ, ಪ್ರಯಾಣಿಕರೊಂದಿಗೆ ಸಂಪರ್ಕ ಸಾಧಿಸಲು ಸರಿಯಾದ ವ್ಯವಸ್ಥೆ ಅಥವಾ ವೇದಿಕೆ ಇಲ್ಲದ ಕಾರಣ ಅವರು ಗ್ರಾಹಕರನ್ನು ಪಡೆಯಲು ಸಾಧ್ಯವಾಗುತ್ತಿಲ್ಲ. ಬೈಕ್ ಡೈರೆಕ್ಟ್ ಒಂದು ವ್ಯಾಪಾರ ಉದ್ಯಮವಲ್ಲ, ಆದರೆ ಸವಾರರ ಜೀವನೋಪಾಯವನ್ನು ಬೆಂಬಲಿಸುವ ಒಂದು ಮಾರ್ಗವಾಗಿದೆ ಎಂದು ರ್‍ಯಾಪಿಡೋ ಕಂಪನಿ ಸ್ಪಷ್ಟಪಡಿಸಿದೆ.

ಸುದ್ದಿ ಮತ್ತು ಜಾಹೀರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634




Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

ಡಿಜಿಟಲ್ ವಾರ್ತೆ

# ಕೌಶಲ್ಯಾಭಿವೃದ್ಧಿ ತರಭೇತಿಗೆ ಅರ್ಜಿ ಆಹ್ವಾನ

ಬೆಂ.ಗ್ರಾ.ಜಿಲ್ಲೆ: ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಪ್ರವಾಸೋದ್ಯಮ/ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲು ಅರ್ಜಿ ಆಹ್ವಾನಿಸಲಾಗಿದೆ.

ಕಾರ್ಯಕ್ರಮದಲ್ಲಿ ಪರಿಶಿಷ್ಟ ಜಾತಿಯ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಫುಡ್ ಕ್ರಾಫ್ಟ್ ಇನ್ಸ್ಟಿಟ್ಯೂಟ್ (FCI) ಹಾಗೂ ಇನ್ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್ಮೆಂಟ್ (IHM) ಬೆಂಗಳೂರು ರವರ ಮೂಲಕ ವಸತಿ ಸಹಿತ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ.

ತರಬೇತಿ ಹಂತದಲ್ಲಿ ಒದಗಿಸುವ ಸೌಲಭ್ಯಗಳು : ಈಗಾಗಲೇ ತರಬೇತಿ ಪಡೆಯುತ್ತಿರುವ ಅಭ್ಯರ್ಥಿಗಳಿಗೆ ರಾಜ್ಯದ ವಿವಿಧ ಪಂಚತಾರಾ ಹಾಗೂ ಇತರೆ ಹೋಟೆಲ್ ಗಳಲ್ಲಿ ಕೆಲಸ ಕಾತರಿಯಾಗಿರುವುದು. ಮಹೆಯಾನ ಅಭ್ಯರ್ಥಿಗಳಿಗೆ ತರಬೇತಿ ಪಡೆಯುವ ವೇಳೆ ರೂ.2000/- ಗಳು ತರಬೇತಿ ಭತ್ಯೆ ನೀಡಲಾಗುವುದು.
ತರಬೇತಿಗೆ ಹಾಜರಾಗುವವರಿಗೆ ವಸತಿ, ಊಟ ಹಾಗೂ ಸಮವಸ್ತ್ರ ನೀಡಲಾಗುವುದು. ತರಬೇತಿ ಜೊತೆಗೆ ರಾಜ್ಯದ ವಿವಿಧ ಪಂಚತಾರಾ ಹಾಗೂ ಇತರೆ ಹೋಟೆಲ್ ಗಳಲ್ಲಿ ಕೆಲಸದ ನೈಜ ಅನುಭವ ಸಹ ನೀಡಲಾಗುವುದು.

`IHM,ಬೆಂಗಳೂರು ಹಾಗೂ FCI ಮೈಸೂರು ಸಂಸ್ಥೆಗಳು ಪ್ರತಿಷ್ಠಿತ ಆತಿಥ್ಯ ಕ್ಷೇತ್ರದಲ್ಲಿ ತರಬೇತಿ ನೀಡುವ ಕೇಂದ್ರ ಹಾಗೂ ರಾಜ್ಯ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಾಗಿದ್ದು, ಈ ಸಂಸ್ಥೆಗಳಿಂದ ತರಬೇತಿ ನೀಡಿ ಪ್ರಮಾಣ ಪತ್ರ ನೀಡುವುದರಿಂದ ರಾಜ್ಯದೊಳಗೆ ಅಲ್ಲದೇ ದೇಶದ ಯಾವುದೇ ಭಾಗದ ಹೋಟೆಲ್ ಉದ್ಯಮದಲ್ಲಿ ಕೆಲಸ ಖಾತರಿಯಾಗುವುದು. Food and Beverage Service Steward ಈ ತರಬೇತಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ 4 ತಿಂಗಳ ತರಬೇತಿಯಿದ್ದು, ಹತ್ತನೇ ತರಗತಿ ಉತ್ತೀರ್ಣವಾಗಿರಬೇಕು, 20 ರಿಂದ 45 ರ ವಯಸ್ಸಿನವರಾಗಿರಬೇಕು.

ಕೊಠಡಿ ಪರಿಚಾರಕ (Room Attendant) ಈ ತರಬೇತಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ 4 ತಿಂಗಳ ತರಬೇತಿಯಿದ್ದು, ಐದನೇ ತರಗತಿ ಉತ್ತೀರ್ಣರಾಗಿರಬೇಕು, 20 ರಿಂದ 45 ರ ವಯಸ್ಸಿನವರಾಗಿರಬೇಕು.


ಮುಂಭಾಗದ ಕಛೇರಿಯ ಸಹಾಯಕ (Front Office Associate) ಈ ತರಬೇತಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ 4 ತಿಂಗಳ ತರಬೇತಿಯಿದ್ದು, ದ್ವಿತೀಯ ಪಿಯುಸಿ ಪಾಸಾಗಿರಬೇಕು, 20 ರಿಂದ 45 ರ ವಯಸ್ಸಿನವರಾಗಿರಬೇಕು.

ಬಹು ಪಾಕಪದ್ಧತಿ ಅಡುಗೆ (Multi Cuisine Cook) ಈ ತರಬೇತಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ 5 ತಿಂಗಳ ತರಬೇತಿಯಿದ್ದು, 8ನೇ ತರಗತಿ ಉತ್ತೀರ್ಣವಾಗಿರಬೇಕು, 20 ರಿಂದ 45 ರ ವಯಸ್ಸಿನವರಾಗಿರಬೇಕು.

ತರಬೇತಿ ಪಡೆಯಲು ಆಸಕ್ತಿ ಇರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಸೆಪ್ಟೆಂಬರ್ 10 ರಂದು ಸಂಜೆ 5:30 ರೊಳಗೆ ಕಚೇರಿಯ ಸಮಯದಲ್ಲಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ, ಕೊಠಡಿ ಸಂಖ್ಯೆ:09 ನೆಲ ಮಹಡಿ, ಜಿಲ್ಲಾಡಳಿತ ಭವನ, ಬೀರಸಂದ್ರ ಗ್ರಾಮ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೂರವಾಣಿ ಸಂಖ್ಯೆ:080-22040633 ಇವರನ್ನು ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಾಯಗೊಂಡ ಮೂವರು ವಿದ್ಯಾರ್ಥಿಗಳ ಚಿಕಿತ್ಸಾ ವೆಚ್ಚ ಸರ್ಕಾರ ಭರಿಸಲಿದೆ



ದೇವನಹಳ್ಳಿ: ಕೋಟೆ ಬೀದಿಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಬಾಲಕರ ಶಾಲೆ ಕಟ್ಟಡದ ಕಿಟಕಿ ಚಾವಣಿ ಕುಸಿದು ಮೂವರು ವಿದ್ಯಾರ್ಥಿಗಳು ಸೋಮವಾರ ಗಾಯಗೊಂಡಿದ್ದರು.

ಈ ಹಿನ್ನೆಲೆಯಲ್ಲಿ ಇಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ನಾಗಣ್ಣಗೌಡ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ನಂತರ ಮಾತನಾಡಿದ ಅವರು ನಮ್ಮ ಸರ್ಕಾರ ಮತ್ತು ಆಯೋಗವು ಮಕ್ಕಳ ಸುರಕ್ಷತೆಗೆ ಮೊದಲ ಆದ್ಯತೆಯನ್ನು ನೀಡುತ್ತೇವೆ, ಆದರೆ ಸಿ.ಎಸ್.ಆರ್ ಅನುದಾನದಲ್ಲಿ ನಿರ್ಮಿಸಿರುವ ಶಾಲಾ ಕಟ್ಟಡದ ಕಾಮಗಾರಿ ಸರಿಯಾಗಿ ಮಾಡಿಲ್ಲ, ಶಾಲೆಯ ಗೋಡೆಗೆ ಮತ್ತು ಸಜ್ಜೆಗೆ ಯಾವುದೇ ರೀತಿಯ ಲಿಂಕ್ ಇಲ್ಲದೆ ಕಟ್ಟಿದ್ದಾರೆ, ಕಂಬಿ ಕಟ್ಟದೆ ಸುಮ್ಮನೆ ಎರಡು ಇಂಚು ಇಟ್ಟಿಗೆ ಸಿಮೆಂಟ್ ಹಾಕಿ ಬಿಟ್ಟಿದ್ದಾರೆ, ಇದು ಹೆಚ್ಚಿನ ದಿನಗಳು ನಿಲ್ಲುವುದಿಲ್ಲ, ಆದರೆ ಇಷ್ಟು ವರ್ಷ ಹೇಗೆ ತಡೆದಿತ್ತು ಎನ್ನುವುದು ಆಶ್ಚರ್ಯ, ಈ ರೀತಿ ಆಗದಂತೆ ಮುಂದೆ ನೋಡಿಕೊಳ್ಳಬೇಕು.

ಶಿಕ್ಷಕರು ಸಹ ನಮಗೆ ತಿಳಿಸಿದ್ದಾರೆ, ಮುಂಜಾಗ್ರತೆ ಕ್ರಮ ವಹಿಸಿದ್ದರೆ ಇಷ್ಟೆಲ್ಲಾ ಅನಾಹುತಗಳು ಆಗುತ್ತಿರಲಿಲ್ಲ, ನಮಗೆ 2016ರಲ್ಲಿ ಕೆಲವು ಸ್ವಯಂ ಸೇವಾ ಸಂಸ್ಥೆಗಳು ಈ ರೀತಿ ಕಾಮಗಾರಿ ಮಾಡುವ ಬಗ್ಗೆ ದೂರು ನೀಡುತ್ತಾರೆ. ಮಕ್ಕಳು ನಮ್ಮ ದೇಶದ ಆಸ್ತಿ, ಅದಕ್ಕಾಗಿ ಗುಣಮಟ್ಟದ ಕಾಮಗಾರಿ ಮಾಡಬೇಕು, ಆದರೆ ಅವರು ಕಟ್ಟಡ ಕಾಮಗಾರಿ ಮಾಡುವ ಇಂಜಿನಿಯರ್ ಗಳು ಬೇಜವಾಬ್ದಾರಿ ಕೆಲಸ ಮಾಡಿದ್ದಾರೆ.

ಶಾಲೆಯಲ್ಲಿ ಮಕ್ಕಳು ಓದುವುದಕ್ಕೆ ಬರುತ್ತಾರೆ ಎನ್ನುವುದನ್ನು ಗಮನದಲ್ಲಿ ಇಟ್ಟುಕೊಂಡು ಕೆಲಸ ಮಾಡಬೇಕು, ಮೂರು ಮಕ್ಕಳಿಗೆ ಬೇಕಾದ ಚಿಕಿತ್ಸಾ ವೆಚ್ಚವನ್ನು ಸರಕಾರ ಭರಿಸಲಿದೆ. ಇದು ದುಃಖಕರ ಸಂಗತಿ, ಈಗಾಗಲೇ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಎಲ್ಲಾ ಹಳೆ ಮತ್ತು ಹೊಸ ಶಾಲೆಗಳ ಕಟ್ಟಡದ ಗುಣಮಟ್ಟವನ್ನು ಪರಿಶೀಲನೆ ಮಾಡಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರನ್ನು ಒದಗಿಸಲು ಉಮಾ ಮಹಾದೇವನ್ ಅವರು ಹಲವಾರು ಕಾರ್ಯಕ್ರಮಗಳನ್ನು ಮಾಡಿದ್ದಾರೆ.

ನಾವು ಮಕ್ಕಳ ಸುರಕ್ಷತೆಗೆ ಮೊದಲು ಆದ್ಯತೆ ನೀಡುತ್ತೇವೆ. ಹಾಗೇ ಮಕ್ಕಳಿಗೆ ಉತ್ತಮ ಗುಣಮಟ್ಟದ ಬಿಸಿಯೂಟವನ್ನು ನೀಡುವಾಗ ಶುಚಿತ್ವವನ್ನು ಕಾಪಾಡಬೇಕು, ಮಕ್ಕಳಿಗೆ ಕುಡಿಯುವ ನೀರು ಮತ್ತು ಉತ್ತಮ ಗುಣಮಟ್ಟದ ಊಟವನ್ನು ನೀಡಿದರೆ ಕ್ರೀಡೆಗಳಲ್ಲಿ ಭಾಗವಹಿಸುವಿಕೆ ಹಾಗೂ ಶಿಕ್ಷಣದಲ್ಲಿ ಉತ್ತಮವಾಗಿ ಕಲಿಯುತ್ತಾರೆ. ಸೇವಾ ಮನೋಭಾವನೆ ಮನಸ್ಥಿತಿಯಿಂದ ಶಾಲಾ ಕಟ್ಟಡ ನಿರ್ಮಿಸಬೇಕು. ಇದಕ್ಕೆ ಸಂಬಂಧಪಟ್ಟ ಅಧಿಕಾರಗಳೊಂದಿಗೆ ಸಭೆ ನಡೆಸಿ ಇನ್ನೂ ಮುಂದೆ ಈ ರೀತಿ ಆಗದಂತೆ ಇಂತವಹರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬೈಲಾಂಜನಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಲಲಿತಮ್ಮ ಸೇರಿದಂತೆ ಶಾಲಾ ಮುಖ್ಯಸ್ಥರು, ಅಧಿಕಾರಿಗಳು ಉಪಸ್ಥಿತರಿದ್ದರು.


# ನಾಡಿನ ಸಮಸ್ತ ಜನತೆಗೆ
# ಗೌರಿ ಗಣೇಶ ಹಬ್ಬದ ಶುಭಾಶಯಗಳು








Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.